ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ಬಳ್ಳಾರಿ. ದೂ : 08392-275198, ಫ್ಯಾಕ್ಸ್ : 08392-275198**

12ನೇ ಸೆಪ್ಟೆಂಬರ್ 2017

# ಪರಿಶಿಷ್ಟ ಸಮುದಾಯಗಳ ಕಲ್ಯಾಣಕ್ಕೆ 5 ವರ್ಷಗಳಲ್ಲಿ 86 ಸಾವಿರ ಕೋಟಿ ರೂ.ಖರ್ಚು : ಸಿಎಂ



ಬಳ್ಳಾರಿ,ಸೆ.12: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕೆ ನಮ್ಮ ಸರ್ಕಾರ ಕಟ್ಟಿಬದ್ಧವಾಗಿದ್ದು, ಅಧಿಕಾರಕ್ಕೆ ಬಂದ 5 ವರ್ಷಗಳಲ್ಲಿ 86 ಸಾವಿರ ಕೋಟಿ ರೂ.ಗಳನ್ನು ಈ ಸಮುದಾಯಗಳ ಕಲ್ಯಾಣಕ್ಕೆ ವಿನಿಯೋಗಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಮಂಗಳವಾರರಂದು ಜಿಲ್ಲಾಡಳಿತ ಹಾಗೂ ಜಿ.ಪಂ. ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಬಳ್ಳಾರಿ ಅಭಿವೃದ್ಧಿ ಹಾಗೂ ಸಾಮಾಜಿಕ ಸಾಧನಾ ಸಮಾವೇಶಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ವರ್ಷ ನಮ್ಮ ಸರಕಾರ ಈ ಸಮುದಾಯಗಳಿಗೆ 27,300 ಕೋಟಿ.ರೂ.ಗಳನ್ನು ಮೀಸಲಿಡಲಾಗಿದೆ ಎಂದು ಹೇಳಿದ ಮುಖ್ಯಮಂತ್ರಿ ಅವರು ಈ ಹಿಂದಿನ ಸರಕಾರ ತನ್ನ ಅಧಿಕಾರ ಅವಧಿಯ ಐದು ವರ್ಷಗಳಲ್ಲಿ 21 ಸಾವಿರ ಕೋಟಿ ರೂ.ಮಾತ್ರ ಖರ್ಚು ಮಾಡಿತ್ತು. ಆದರೇ ಈಗ ಅವರಿಗೆ ಈ ಸಮುದಾಯಗಳ ಬಗ್ಗೆ ದಿಢೀರ್ ನೆನಪಾಗಿದೆ ಮತ್ತು ಅವರನ್ನು ಒಲಿಸಿಕೊಳ್ಳಲು ದಿನಕ್ಕೊಂದು ನಾಟಕ ವಾಡುತ್ತಿದ್ದಾರೆ ಎಂದು ಹೇಳಿದರು. ವಾಸಿಸುವವನೇ ನೆಲದೊಡೆಯ ಕಾಯ್ದೆ ಜಾರಿಗೆ ತರುವುದರ ಮೂಲಕ ಲಂಬಾಣಿಗರು, ಗೊಲ್ಲರು, ನಾಯಕರು ನೆಮ್ಮದಿಯಿಂದ ಜೀವಿಸಿವಂತೆ ಮಾಡಿದ ತೃಪ್ತಿ ಎನಗಿದೆ ಎಂದರು.  ಜೂ.21 ರಂದು ರೈತರ ಸಾಲಮನ್ನಾ ಮಾಡುವುದರ ಮೂಲಕ ಅವರ ನೆರವಿಗೆ ಧಾವಿಸುವ ಕೆಲಸವನ್ನು ನಮ್ಮ ಸರಕಾರ ಮಾಡಿದೆ ಎಂದು ಹೇಳಿದ ಸಚಿವರು ಕೇಂದ್ರ ಸರಕಾರವು ವಾಣಿಜ್ಯ ಬ್ಯಾಂಕ್‌ಗಳಲ್ಲಿನ ರೈತರ ಸಾಲಮನ್ನಾ ಮಾಡಲಿ ಎಂದರು. ಹೈದ್ರಬಾದ್ ಕರ್ನಾಟಕ ಅಭಿವೃದ್ಧಿಗೆ ನಮ್ಮ ಸರಕಾರ ಕಟಿಬದ್ಧವಾಗಿದೆ ಎಂಬುದನ್ನು ತಮ್ಮ ಮಾತುಗಳಲ್ಲಿ ಸ್ಪಷ್ಟಪಡಿಸಿದರ ಮುಖ್ಯಮಂತ್ರಿ ಅವರು ಕಳೆದ ನಾಲ್ಕು ವರ್ಷಗಳಲ್ಲಿ 4500 ಕೋಟಿ ರೂ.ಗಳನ್ನು ಈ ಭಾಗದ ಅಭಿವೃದ್ಧಿಗೆ ವಿನಿಯೋಗಿಸಿದೆ ಎಂದರು. ಪ್ರತಿ ವರ್ಷ 3 ಲಕ್ಷ ಮನೆಗಳನ್ನು ಕಟ್ಟುತ್ತೇವೆ ಎಂದು ಪ್ರಣಾಳಿಕೆಯಲ್ಲಿ ಘೋಷಿಸಿದ್ದೇವು. ಇದುವರೆಗೆ 12 ಲಕ್ಷ ಮನೆಗಳನ್ನು ನಿರ್ಮಿಸಲಾಗಿದ್ದು, ಈ ವರ್ಷದೊಳಗೆ 15 ಲಕ್ಷ ಮನೆಗಳನ್ನು ನಿರ್ಮಿಸಲಾಗುವುದು ಎಂದರು. ಚುನಾವಣಾ ಸಂದರ್ಭದಲ್ಲಿ ನೀಡಿದ 165 ಭರವಸೆಗಳಲ್ಲಿ 155 ಭರವಸೆಗಳನ್ನು ಈಡೇರಿಸಿದ್ದು, ನಮ್ಮದು ನುಡಿದಂತೆ ನಡೆದ ಸರಕಾರ ಎಂದರು.

ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಆಂಜಿನೇಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವೆ ಉಮಾಶ್ರೀ, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರಾದ ತನ್ವೀರ್ ಸೇಠ್, ಜಿಲ್ಲಾ ಉಸ್ತುವಾರಿ ಹಾಗೂ ಕಾರ್ಮಿಕ ಸಚಿವ ಸಂತೋಷ್ ಲಾಡ್, ನಗರ ಶಾಸಕ ಅನಿಲ್ ಲಾಡ್ ಸೇರಿದಂತೆ ಇತರರು ಮಾತನಾಡಿದರು.

ಈ ಸಂದರ್ಭದಲ್ಲಿ ಶಾಸಕರಾದ ತುಕಾರಾಂ, ಭೀಮಾ ನಾಯಕ್, ಎನ್.ವೈ.ಗೋಪಾಲಕೃಷ್ಣ, ಪಿ.ಟಿ.ಪರಮೇಶ್ವರ ನಾಯಕ್, ಕೆ.ಸಿ.ಕೊಂಡಯ್ಯ, ಅಲ್ಲ ವೀರಭದ್ರಪ್ಪ, ಎಂ.ಪಿ.ರವೀಂದ್ರ, ಬಿ.ಎಂ.ನಾಗರಾಜ್, ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷ ಎ.ಮಾನಯ್ಯ, ಜಿ.ಪಂ.ಸದಸ್ಯ ಪ್ರವೀಣ್ ಸಿಂಗ್, ಕಾರ್ಮಿಕ ಇಲಾಖೆ ಆಯುಕ್ತ ಅಮ್ಲಾನ್ ಆದಿತ್ಯ ಬಿಸ್ವಾಸ್, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಗಿರಿಮಲ್ಲಪ್ಪ, ಜಿ.ಪಂ.ಸಿಇಓ ಡಾ.ಕೆ.ವಿ.ರಾಜೇಂದ್ರ ಪ್ರಸಾದ್, ಎಸ್ಪಿ ಆರ್.ಚೇತನ್, ಪಾಲಿಕೆ ಮಹಾಪೌರರಾದ ವೆಂಕಟರಮಣ, ಬುಡಾ ಅಧ್ಯಕ್ಷ ಜಿ.ಎಸ್.ಆಂಜಿನೇಯಲು ಸೇರಿದಂತೆ ವಿವಿಧ ಗಣ್ಯರು ಉಪಸ್ಥಿತರಿದ್ದರು. ಜಿಲ್ಲಾಧಿಕಾರಿ ಡಾ.ರಾಮ್ ಪ್ರಸಾತ್ ಮನೋಹರ್ ಅವರು ಸ್ವಾಗತಿಸಿದರು.

ಈ ಸಂದರ್ಭದಲ್ಲಿ 3.42 ಲಕ್ಷ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳ ವಿತರಣೆ ಮಾಡಲಾಯಿತು ಹಾಗೂ ಜಿಲ್ಲೆಯಲ್ಲಿ ವಿವಿಧ ಕಾಮಗಾರಿಗಳಿಗೆ ಒಟ್ಟು 2959 ಕೋಟಿ ರೂ. ಅನುದಾನದಡಿಯಲ್ಲಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಕನ್ನಡ ವಿವಿಯ ಬೆಳ್ಳಿಹಬ್ಬಕ್ಕೆ ಸಂಭ್ರಮದ ಚಾಲನೆ

# ಕನ್ನಡ ವಿವಿಯಲ್ಲಿ ಅಂಬೇಡ್ಕರ್,ಜಗಜೀವನರಾಂ ಅಧ್ಯಯನ ಪೀಠ ಶೀಘ್ರ ಆರಂಭ: ಸಿಎಂ



ಬಳ್ಳಾರಿ/ಹೊಸಪೇಟೆ,ಸೆ.12: ಕನ್ನಡ ವಿಶ್ವವಿದ್ಯಾಲಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಪೀಠ ಮತ್ತು ಡಾ.ಬಾಬು ಜಗಜೀವನರಾಂ ಅಧ್ಯಯನ ಪೀಠಗಳನ್ನು ಶೀಘ್ರ ಆರಂಭಿಸಲಾಗುವುದು ಮತ್ತು ಈ ಪೀಠಗಳಿಗೆ ತಲಾ 2 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಕನ್ನಡ ವಿಶ್ವವಿದ್ಯಾಲಯಕ್ಕೆ 25 ವರ್ಷಗಳು ಸಂದಿರುವ ಪ್ರಯುಕ್ತ ಹಂಪಿ ಸಮೀಪದ ಕನ್ನಡ ವಿಶ್ವವಿದ್ಯಾಲಯದಲ್ಲಿ ಮಂಗಳವಾರ ಏರ್ಪಡಿಸಿದ್ದ ಬೆಳ್ಳಿಹಬ್ಬಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿವಿಯಲ್ಲಿ ಈ ಎರಡು ಅಧ್ಯಯನ ಪೀಠಗಳನ್ನು ಸ್ಥಾಪಿಸುವ ಮೂಲಕ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಂ ಅವರ ಅಧ್ಯಯನ ಮತ್ತು ಸಂಶೋಧನೆಗೆ ಒತ್ತು ನೀಡುವ ಕೆಲಸವನ್ನು ಮಾಡಲಾಗುವುದು ಎಂದು ಅವರು ಹೇಳಿದರು. ಬಜೆಟ್‌ನಲ್ಲಿ ವಿವಿಗೆ ಬೆಳ್ಳಿಹಬ್ಬಕ್ಕಾಗಿ 25 ಕೋಟಿ ರೂ. ಒದಗಿಸಲಾಗುವುದು ಎಂದು ಘೋಷಿಸಲಾಗಿತ್ತು. ಅದರಂತೆ ಆ ಹಣವನ್ನು ರೆಗ್ಯೂಲರ್ ಗ್ರ್ಯಾಂಟ್ ಜತೆಗೆ ಹೆಚ್ಚುವರಿಯಾಗಿ ಈ ಅನುದಾನವನ್ನು ಒದಗಿಸಲಾಗುವುದು; ಈ ವಿಷಯದಲ್ಲಿ ಸಂಶಯ ಬೇಡ ಎಂದು ಹೇಳಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕನ್ನಡ ವಿವಿಯ ಸಮಗ್ರ ಅಭಿವೃದ್ಧಿಗೆ ಸರಕಾರ ಕಟಿಬದ್ಧವಾಗಿದೆ ಎಂಬುದನ್ನು ತಮ್ಮ ಮಾತುಗಳಲ್ಲಿ ಸ್ಪಷ್ಟಪಡಿಸಿದರು.

**ವಿಶ್ವದ ಜ್ಞಾನ ಕನ್ನಡದ ಮೂಲಕ ಪಡೆದುಕೊಳ್ಳಿ:** ವಿಶ್ವದ ಜ್ಞಾನವನ್ನು ಕನ್ನಡ ಮೂಲಕ ಪಡೆದುಕೊಳ್ಳಬೇಕು ಮತ್ತು ಕನ್ನಡದ ಜ್ಞಾನವನ್ನು ವಿಶ್ವದ ವಿವಿಧ ಭಾಷೆಗಳ ಮೂಲಕ ವಿಶ್ವದ ವಿವಿಧ ಜನರಿಗೆ ತಿಳಿಸುವ ಕೆಲಸವಾಗಬೇಕು. ಈ ದಿಕ್ಕಿನಲ್ಲಿ ಕನ್ನಡ ವಿಶ್ವವಿದ್ಯಾಲಯ ನಡೆದಿದೆ ಎಂದು ಭಾವಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಕನ್ನಡೇತರರಿಗೆ ಕನ್ನಡ ಕಲಿಸುವ ಕೆಲಸವಾಗಬೇಕು ಎಂಬುದನ್ನು ತಮ್ಮ ಭಾಷಣದಲ್ಲಿ ಪುನರುಚ್ಚರಿಸಿದ ಮುಖ್ಯಮಂತ್ರಿಗಳು, ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ಹೋರಾಟಗಾರರು ಕಟ್ಟಿಕೊಂಡ ಆಶಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯ ಬೆಳೆಯಲಿ ಮತ್ತು ಕನ್ನಡ ನಾಡಿನಲ್ಲಿ ಕನ್ನಡ ಕಂಪನ್ನು ಎಲ್ಲೆಡೆ ಪಸರಿಸುವ ಕೆಲಸ ವಿವಿ ಮಾಡಲಿ ಎಂದು ಆಶಿಸಿದರು.

ಇಡೀ ದೇಶದಲ್ಲಿ ಭಾಷೆಗಾಗಿ ಇರುವ ಏಕೈಕ ವಿವಿ ಕನ್ನಡ ವಿಶ್ವವಿದ್ಯಾಲಯವಾಗಿದೆ ಎಂಬುದನ್ನು ಹೇಳಿದ ಸಿಎಂ ಅವರು, ಕನ್ನಡ ಭಾಷೆ,ಕಲೆ,ಸಂಗೀತ,ಸಂಸ್ಕೃತಿ ಬೆಳೆಸಬೇಕು ಮತ್ತು ಇನ್ನಷ್ಟು ಎತ್ತರಕ್ಕೆ ತೆಗೆದುಕೊಂಡು ಹೋಗಬೇಕು. ಕನ್ನಡಭಾಷೆ ರಾಜ್ಯದಲ್ಲಿ ಸಾರ್ವಭೌಮ ಭಾಷೆಯಾಗಿ ಇರಬೇಕು ಅಂತ 25 ವರ್ಷಗಳ ಹಿಂದೆ ಈ ವಿವಿಯನ್ನು ಸ್ಥಾಪಿಸಲಾಗಿತ್ತು. ಬಹಳಷ್ಟು ಬೆಳೆದಿದೆ ಮತ್ತು ಇನ್ನಷ್ಟು ಬೆಳೆಯಬೇಕಿದೆ ಎಂದರು.

ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ನಾಡೋಜ ಪಾಟೀಲ್ ಪುಟ್ಟಪ್ಪ ಹಾಗೂ ವಿಶ್ರಾಂತ ಕುಲಪತಿ ಡಾ.ಹಿ.ಚ.ಬೋರಲಿಂಗಯ್ಯ ಮಾತನಾಡಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಮಲ್ಲಿಕಾ ಘಂಟಿ ಅವರು ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿಶ್ರಾಂತ ಕುಲಪತಿಗಳನ್ನು ಮತ್ತು ಮಾಜಿ ಕುಲಸಚಿವರನ್ನು ಸನ್ಮಾನಿಸಲಾಯಿತು.

ಬೆಳ್ಳಿಹಬ್ಬದ ನಿಮಿತ್ತ ಹೊರತರಲಾಗಿರುವ ಕನ್ನಡ ವಿವಿಯ ಅಂಚೇಚೀಟಿಯನ್ನು ಮುಖ್ಯಮಂತ್ರಿಗಳು ಬಿಡುಗಡೆ ಮಾಡಿದರು. ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ

ಮತ್ತು ಸಮಾಜಕಲ್ಯಾಣ ಸಚಿವ ಆಂಜನೇಯ ಅವರು 25 ಪುಸ್ತಕಗಳನ್ನು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಕಾರ್ಮಿಕ,ಕೌಶಲ್ಯಅಭಿವೃದ್ಧಿ ಸಚಿವ ಸಂತೋಷ ಲಾಡ್, ಶಾಸಕರಾದ ಬಿ.ಎಸ್.ಆನಂದಸಿಂಗ್,ಭೀಮಾನಾಯ್ಕ, ಮಾಜಿ ಶಾಸಕ ಅಮರೇಗೌಡ ಬಯ್ಯಾಪುರ, ಉತ್ತರ ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ವೀಣಾ ಶ್ರೀನಿವಾಸನ್, ಬೆಂಗಳೂರು ನಗರ ಜಿಲ್ಲಾಧಿಕಾರಿ ವಿ.ಶಂಕರ್, ಬಳ್ಳಾರಿ ಜಿಲ್ಲಾಧಿಕಾರಿ ಡಾ.ರಾಮ್ ಪ್ರಸಾತ್, ಎಸ್ಪಿ ಆರ್.ಚೇತನ್, ಸಂಶೋಧಕ ಹಾಗೂ ಕನ್ನಡ ವಿವಿಯ ವಿಶ್ರಾಂತ ಕುಲಪತಿ ದಿಂ.ಡಾ.ಎಂ.ಎಂ.ಕಲಬುರಗಿ ಅವರ ಪತ್ನಿ ಉಮಾದೇವಿ ಕಲಬುರಗಿ ಸೇರಿದಂತೆ ವಿಶ್ರಾಂತ ಕುಲಪತಿಗಳು ಮತ್ತು ಮಾಜಿ ಕುಲಸಚಿವರು ಮತ್ತಿತರರು ಇದ್ದರು.

ಕುಲಸಚಿವ ಡಾ.ಡಿ.ಪಾಂಡುರಂಗಬಾಬು ಅವರು ವಂದಿಸಿದರು.

ಇದಕ್ಕೂ ಮುಂಚೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿ ತರಗತಿಗಳ ಕಟ್ಟಡ, ಹೆಣ್ಮಕ್ಕಳ ಹಾಸ್ಟೆಲ್, ಚರಿತ್ರೆ ಅಧ್ಯಯನ ವಿಭಾಗ ಕಟ್ಟಡ, ಬುಡಕಟ್ಟು ಅಧ್ಯಯನ ವಿಭಾಗದ ಕಟ್ಟಡಗಳನ್ನು ಉದ್ಘಾಟಿಸಿದರು.

-------------------------